ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ, ಕಾರ್ಲಟನ್ ಭವನ, ಅರಮನೆ ರಸ್ತೆ,
ಬೆಂಗಳೂರು – 560 001.
ದಿನಾಂಕ : 16.08.2018

# ಪತ್ರಿಕಾ ಪ್ರಕಟಣೆ

ವಿಷಯ : ಪೊಲೀಸ್ ಕಾನ್ಸ್‌ಟೇಬಲ್ (ನಾಗರಿಕ) ಹುದ್ದೆಗಳ ಲಿಖಿತ ಪರೀಕ್ಷೆಯನ್ನು ರದ್ದುಪಡಿಸುವ ಕುರಿತು.

~ ~ ~ ~

ಪೊಲೀಸ್ ಕಾನ್ಸ್‌ಟೇಬಲ್ (ನಾಗರಿಕ) ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ಅಧಿಸೂಚನೆ ಸಂಖ್ಯೆ:05/ನೇಮಕಾತಿ–4/2018–19, ದಿನಾಂಕ:21.06.2018 ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿ, ನೇಮಕಾತಿ ಪ್ರಕ್ರಿಯೆಯನ್ನು ಕೈಗೊಳ್ಳಲಾಗಿರುತ್ತದೆ. ಅರ್ಜಿ ಸಲ್ಲಿಸಿರುವ ಅರ್ಹ ಅಭ್ಯರ್ಥಿಗಳಿಗೆ ನಿಯಮಾನುಸಾರ ದಿನಾಂಕ: 19.08.2018 ರಂದು ರಾಜ್ಯದ ಕಮೀಷನರೇಟ್ ಮತ್ತು ಜಿಲ್ಲಾ ಕೇಂದ್ರಗಳಲ್ಲಿ ಲಿಖಿತ ಪರೀಕ್ಷೆಯನ್ನು ನಡೆಸಲು ತೀರ್ಮಾನಿಸಲಾಗಿರುತ್ತದೆ. ಆದರೆ ರಾಜ್ಯದ ವಿವಿಧ ಜಿಲ್ಲೆಗಳಲ್ಲಿ ತುಂಬಾ ಮಳೆಯ ಕಾರಣದಿಂದ ಪ್ರವಾಹ ಉಂಟಾಗಿದ್ದು, ಅಭ್ಯರ್ಥಿಗಳು ಲಿಖಿತ ಪರೀಕ್ಷೆಯ ಕೇಂದ್ರಗಳಿಗೆ ಹಾಜರಾಗಲು ಅನಾನುಕೂಲವಾಗುವ ಸಾಧ್ಯತೆಯಿರುವುದರಿಂದ ದಿನಾಂಕ: 19.08.2018 ರಂದು ರಾಜ್ಯದ ಕಮೀಷನರೇಟ್ ಮತ್ತು ಜಿಲ್ಲಾ ಕೇಂದ್ರಗಳಲ್ಲಿ ನಡೆಸಲು ತೀರ್ಮಾನಿಸಲಾಗಿದ್ದ ಲಿಖಿತ ಪರೀಕ್ಷೆಯನ್ನು ರದ್ದುಪಡಿಸಲಾಗಿದ್ದು, ಮುಂದಿನ ಲಿಖಿತ ಪರೀಕ್ಷೆಯ ದಿನಾಂಕವನ್ನು ತಿಳಿಯಪಡಿಸಲಾಗುವುದು.

ಸಹಿ/–
ಅಡಿಷನಲ್ ಡೈರೆಕ್ಟರ್ ಜನರಲ್ ಆಫ್ ಪೊಲೀಸ್,
ನೇಮಕಾತಿ ರವರ ಪರವಾಗಿ.